# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 61
2. ಸದಸ್ಯರ ಹೆಸರು : ಶ್ರೀ ಆರ್.ಧರ್ಮಸೇನಾ
3. ಉತ್ತರಿಸಬೇಕಾದ ದಿನಾಂಕ : 09-07-2018

| ಕ್ರ ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ | ಹಾಸನ ಜಿಲ್ಲೆ, ಹಾಸನ ತಾಲ್ಲೂಕು, ಸಾಲಗಾಮೆ ಹೋಬಳಿ ಚಿಕ್ಕಗದ್ದುವಳ್ಳಿ, ಕ್ಯಾತನಹಳ್ಳಿ ಮುಂತಾದ ಗ್ರಾಮಗಳ ರೈತರ ಜಮೀನುಗಳನ್ನು ಯಗಚಿ ನಾಲೆ ಕ್ಯಾತನಹಳ್ಳಿ ಏತ ನೀರಾವರಿ ಯೋಜನೆಗಾಗಿ ಭೂಸ್ವಾಧೀನ ಪಡಿಸಿಕೊಂಡಿದ್ದು, ಭೂಪರಿಹಾರ ಧನ ಕಡಿಮೆ ಕೊಟ್ಟಿರುವುದರಿಂದ ರೈತರು ನ್ಯಾಯಾಲಯದಲ್ಲಿ ದಾವೆ ಹೂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹಾಸನ ಜಿಲ್ಲೆ, ಹಾಸನ ತಾಲ್ಲೂಕು, ಸಾಲಗಾಮೆ ಹೋಬಳಿ, ಚಿಕ್ಕಗದವಳ್ಳಿ, ಕ್ಯಾತನಹಳ್ಳಿ ಮುಂತಾದ ಗ್ರಾಮಗಳ ಜಮೀನು ಯಗಚಿ ಜಲಾಶಯ ಕ್ಯಾತನಹಳ್ಳಿ ಏತ ನೀರಾವರಿ ಯೋಜನೆಗಾಗಿ ಮೊದಲನೇ ಹಂತದಲ್ಲಿ 60-19 ಎಕರೆ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲಾಗಿದ್ದು, ಒಟ್ಟು 168 ಭೂಮಾಲೀಕರಿಗೆ ರೂ.44,51,889/- ಗಳ ಪರಿಹಾರ ಪಾವತಿ ಮಾಡಲಾಗಿದೆ. ಒಟ್ಟು 168 ಭೂಮಾಲೀಕರ ಪೈಕಿ 137 ಜನ ಭೂಮಾಲೀಕರು ಹೆಚ್ಚಿನ ಪರಿಹಾರ ಕೋರಿ ನ್ಯಾಯಾಲಯದಲ್ಲಿ ದಾವಾ ಹೂಡಿರುವ ಅಂಶವು ಸರ್ಕಾರದ ಗಮನಕ್ಕೆ ಬಂದಿರುತ್ತದೆ. |
| ಆ | ಹಾಸನದ ಸಿವಿಲ್ ನ್ಯಾಯಾಲಯದಲ್ಲಿ ರೈತರಿಗೆ ಹೆಚ್ಚಿನ ಭೂಪರಿಹಾರ ನೀಡುವಂತೆ ಆದೇಶ ನೀಡಿ 18 ತಿಂಗಳು ಕಳೆದರೂ ಇನ್ನೂ ನೀಡದಿರಲು ಕಾರಣವೇನು; | ಹಾಸನ ಸಿವಿಲ್ ನ್ಯಾಯಾಲಯದ ಆದೇಶದನ್ವಯ ಗುಂಟೆ 1 ಕ್ಕೆ ರೂ.1.00 ಲಕ್ಷದಂತೆ ಪರಿಹಾರ ನಿಗಧಿಪಡಿಸಿದ್ದು, ಸದರಿ ಪ್ರಕರಣಗಳಿಂದ ಸರ್ಕಾರಕ್ಕೆ ಅತೀ ಹೆಚ್ಚಿನ ಆರ್ಥಿಕ ಹೊರೆ ಉಂಟಾಗುತ್ತಿರುವ ಹಿನ್ನೆಲೆಯಲ್ಲಿ, ಸದರಿ ಪ್ರಕರಣಗಳಿಗೆ ಸಂಬಂಧಿಸಿದಂತೆ ಕಾನೂನು ಕೋಶದ ಅಭಿಪ್ರಾಯ ಪಡೆದು ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ಮೇಲ್ಮನವಿ ಸಲ್ಲಿಸಲಾಗುತ್ತಿದೆ. ಈ ಪೈಕಿ ಈಗಾಗಲೇ ಹಲವಾರು ಪ್ರಕರಣಗಳಲ್ಲಿ ಮೇಲ್ಮನವಿ ಸಲ್ಲಿಸಲಾಗಿದ್ದು, ವಿಚಾರಣಾ ಹಂತದಲ್ಲಿವೆ. ಇನ್ನು ಉಳಿದ ಪ್ರಕರಣಗಳಿಗೆ ಸಂಬಂಧಿಸಿದಂತೆ ಕಾನೂನು ಕೋಶದ ಅಭಿಪ್ರಾಯ ಪಡೆದು ಮೇಲ್ಮನವಿ ಸಲ್ಲಿಸಲು ಕ್ರಮ ವಹಿಸಲಾಗುತ್ತಿದೆ. |
| ಇ | ಕಳೆದ ಅಧಿವೇಶನದಲ್ಲಿ ಸರ್ಕಾರವು ಈ ಬಗ್ಗೆ ಕ್ರಮ ಕೈಗೊಳ್ಳುವುದಾಗಿ ತಿಳಿಸಿದ್ದರೂ ಸಹ ಇದುವರೆವಿಗೂ ರೈತರಿಗೆ ಪರಿಹಾರಧನ ಪಾವತಿಯಾಗದಿರುವುದರಿಂದ ಆದಷ್ಟು ಶೀಘ್ರವಾಗಿ ಹೆಚ್ಚುವರಿ ಪರಿಹಾರ ಧನವನ್ನು ರೈತರಿಗೆ ಕೊಡಿರುವ ವ್ಯವಸ್ಥೆ ಮಾಡಲಾಗುವುದೇ? | |

ಸಂಖ್ಯೆ:ಜಸಂಇ 38 ಎಲ್‌ಎಕ್ಯೂ 2018

(ಡಿ.ಕೆ.ಶಿವಕುಮಾರ್)
ಜಲ ಸಂಪನ್ಮೂಲ ಸಚಿವರು